3-12-2022
UDAYAVANI - MANIPAL

# ದಿ ಎಕನಾಮಿಕ್ ಟೈಮ್ಸ್‌ನಿಂದ ಮಣಿಪಾಲ ಆಸ್ಪತ್ರೆಗೆ ಅತ್ಯುತ್ತಮ ಆಸ್ಪತ್ರೆ ಪ್ರಶಸ್ತಿ




**ಮಣಿಪಾಲ, ಡಿ. 2:** ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆಗೆ ದಿ ಎಕನಾಮಿಕ್ ಟೈಮ್ಸ್ ಅವರಿಂದ ಮೂಳೆ ಮತ್ತು ಕೀಲಿನ ವಿಭಾಗ (ದಕ್ಷಿಣ)-2022 ವಿಭಾಗ ದಲ್ಲಿ ಅತ್ಯುತ್ತಮ ಆಸ್ಪತ್ರೆ ಪ್ರಶಸ್ತಿ ಲಭಿಸಿದೆ.

ಎಕನಾಮಿಕ್ ಟೈಮ್ಸ್ 2 ನೇ ಆವೃತ್ತಿಯ 'ಆರೋಗ್ಯ ಕ್ಷೇತ್ರದ ಪ್ರಶಸ್ತಿ'ಯಲ್ಲಿ ಆರೋಗ್ಯ ಕ್ಷೇತ್ರದ ಪ್ರತಿಯೊಂದು ವಿಭಾಗದಲ್ಲಿ ಅದ್ಭುತ ಕೊಡುಗೆ ನೀಡಿರುವ ಸಂಸ್ಥೆ ಹಾಗೂ ಸಾಧಕರ ಸಾಧನೆಯನ್ನು ದೃಢೀಕರಿಸುವುದು ಆಗಿದೆ. ಮಣಿಪಾಲದ ಮಾಹೆಯ ಸಹ ಕುಲಾಧಿಪತಿ ಡಾ। ಎಚ್. ಎಸ್.ಬಲ್ಲಾಳ್ ಅವರು ವೈದ್ಯಕೀಯ ಅಧೀಕ್ಷಕ ಡಾ। ಅವಿನಾಶ್ ಶೆಟ್ಟಿ, ಮಾಹೆಯ ಬೋಧನಾ ಆಸ್ಪತ್ರೆಗಳ ಸಿಇಒ ಡಾ। ಆನಂದ್ ವೇಣುಗೋಪಾಲ್, ಮೂಳೆ ಮತ್ತು ಕೀಲಿನ ವಿಭಾಗಧ ಮುಖ್ಯಸ್ಥ ಡಾ। ಶ್ಯಾಮಸುಂದರ್ ಭಟ್ ಅವರಿಗೆ ಪ್ರಶಸ್ತಿಯನ್ನು ಹಸ್ತಾಂತರಿಸಿದರು.

ಮಾಹೆ ಸಿಒಒ ಸಿ.ಜಿ. ಮುತ್ತಣ್ಣ, ಕೆಎಂಸಿ ಡೀನ್ ಡಾ। ಶರತ್ ಕೆ. ರಾವ್, ಆರ್ಥೋಪೆಡಿಕ್ಸ್ ವಿಭಾಗದ ಎಲ್ಲ ಘಟಕದ ಮುಖ್ಯಸ್ಥರು ಮತ್ತು ಆಸ್ಪತ್ರೆಯ ಇತರ ನಿರ್ವಹಣ ಸಿಬಂದಿ ಉಪಸ್ಥಿತರಿದ್ದರು.

ಡಾ। ಎಚ್.ಎಸ್.ಬಲ್ಲಾಳ್ ಮಾತನಾಡಿ, ಆಸ್ಪತ್ರೆಯು ಉತ್ತಮ ಪ್ರತಿಭೆಯನ್ನು ಗುರುತಿಸಿ ಅವರನ್ನು ಬೆಳೆಸುವ ಮೂಲಕ ಸಮಾಜಕ್ಕೆ ಉತ್ತಮ ಸೇವೆಯನ್ನು ನೀಡಲು ಸದಾ ಪ್ರಯತ್ನಿಸುತ್ತದೆ. ಮೂಳೆ ಮತ್ತು ಕೀಲಿನ ವಿಭಾಗವು ಉಪ-ವಿಶೇಷತೆಯನ್ನು ರಚಿಸಿಕೊಂಡಿದೆ ಮತ್ತು ಪ್ರತಿ ಘಟಕವು ಬೆನ್ನುಮೂಳೆ, ಭುಜ, ಮೊಣಕಾಲು, ಕೈ, ಮಕ್ಕಳ ಮೂಳೆ ಮತ್ತು ಕೀಲಿನ, ಕ್ರೀಡಾ ಗಾಯ, ಕಾಲು ಮತ್ತು ಪಾದದ ಚಿಕಿತ್ಸೆಯಲ್ಲಿ ಪರಿಣತಿಯನ್ನು ಹೊಂದಿದೆ ಎಂದರು. ಕೆಎಂಸಿ ಮಣಿಪಾಲದ ಮೂಳೆಚಿಕಿತ್ಸಾ ವಿಭಾಗವು ಎಕನಾಮಿಕ್ ಟೈಮ್ಸ್‌ನಿಂದ ಇಂತಹ ಪ್ರತಿಷ್ಠಿತ ಪ್ರಶಸ್ತಿ ಪಡೆದಿರುವುದು ಅತ್ಯುತ್ತಮ ಸಾಧನೆಯಾಗಿದೆ ಎಂದು ಡೀನ್ ಡಾ। ಶರತ್ ಕೆ. ರಾವ್ ಹೇಳಿದರು.

ವಿಜಯ ಕರ್ನಾಟಕ

ಶನಿವಾರ,3 ಡಿಸೆಂಬರ್ 2022, ಮಂಗಳೂರು

# ಮಣಿಪಾಲ ಕೆಎಂಸಿಗೆ ದಿ ಎಕನಾಮಿಕ್ ಟೈಮ್ಸ್‌ನಿಂದ ಮೂಳೆ, ಕೀಲಿನ ವಿಭಾಗ ಅತ್ಯುತ್ತಮ ಆಸ್ಪತ್ರೆ ಪ್ರಶಸ್ತಿ




**ಉಡುಪಿ:** ಮಣಿಪಾಲ ಕಸ್ತೂರ್ಬಾ ಆಸ್ಪತ್ರೆಗೆ ಎಕನಾಮಿಕ್ ಟೈಮ್ಸ್‌ನಿಂದ ಮೂಳೆ ಮತ್ತು ಕೀಲಿನ ವಿಭಾಗ (ದಕ್ಷಿಣ) 2022 ಅತ್ಯುತ್ತಮ ಆಸ್ಪತ್ರೆ ಪ್ರಶಸ್ತಿ ಲಭ್ಯವಾಗಿದೆ.

ಎಕನಾಮಿಕ್ ಟೈಮ್ಸ್-2ನೇ ಆವೃತ್ತಿಯ ಆರೋಗ್ಯ ಕ್ಷೇತ್ರದ ಪ್ರಶಸ್ತಿಯಲ್ಲಿ ಗುರುತಿಸುವುದು, ಅಂಗೀಕರಿಸುವುದು ಮತ್ತು ಆರೋಗ್ಯ ಕ್ಷೇತ್ರದ ಪ್ರತಿಯೊಂದು ವಿಭಾಗದಲ್ಲಿ ಅದ್ಭುತ ಕೊಡುಗೆ ನೀಡಿರುವ ನಾಯಕರು ಹಾಗೂ ಸಾಧಕರ ಸಾಧನೆಯನ್ನು ದೃಢೀಕರಿಸುವುದು ಆಗಿದೆ. ಎಕನಾಮಿಕ್ ಟೈಮ್ಸ್‌ನ ಈ ಪ್ರಶಸ್ತಿಯ ಮಾನದಂಡವೂ, ರೋಗ ನಿರ್ಣಯ ಮತ್ತು ಪರೀಕ್ಷೆಗಳಲ್ಲಿ ಗಮನಾರ್ಹವಾದ ಬದಲಾವಣೆಗಳನ್ನು ಒದಗಿಸುವುದರಿಂದ ಹಿಡಿದು, ರೋಗಿಗಳಿಗೆ ಉತ್ತಮ ಚಿಕಿತ್ಸೆ ನೀಡಲು ಅನುಕೂಲವಾಗುವಂತೆ, ಪ್ರತಿ ಸೌಲಭ್ಯವನ್ನು, ಅದರ ಮೂಲಸೌಕರ್ಯ ಹಾಗೂ ಅತ್ಯುತ್ತಮ ತಂತ್ರಜ್ಞಾನವನ್ನು ಒದಗಿಸುವವರ ಪ್ರತಿಯೊಬ್ಬರ ಕೊಡುಗೆ ಮತ್ತು ಅವರ ಪ್ರಯತ್ನಗಳಿಗಾಗಿ ಗುರುತಿಸಲ್ಪಡುತ್ತಾರೆ.

ಮಣಿಪಾಲ ಮಾಹೆಯ ಸಹಕುಲಾಧಿಪತಿ ಡಾ. ಎಚ್. ಎಸ್. ಬಲ್ಲಾಳ್, ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ, ಮಾಹೆಯ ಬೋಧನಾ ಆಸ್ಪತ್ರೆಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ಆನಂದ್ ವೇಣುಗೋಪಾಲ್ ಮತ್ತು ಮೂಳೆ ಮತ್ತು ಕೀಲಿನ ವಿಭಾಗದ ಮುಖ್ಯಸ್ಥ ಡಾ. ಶ್ಯಾಮಸುಂದರ್ ಭಟ್ ಅವರಿಗೆ ಪ್ರಶಸ್ತಿ ಹಸ್ತಾಂತರಿಸಿದರು.

ಮಾಹೆ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸಿ.ಜಿ. ಮುತ್ತಣ್ಣ, ಮಣಿಪಾಲ ಕೆಎಂಸಿ ಡೀನ್ ಡಾ. ಶರತ್ ಕೆ. ರಾವ್, ಆರ್ಥೋಪೆಡಿಕ್ಸ್ ವಿಭಾಗದ ಎಲ್ಲ ಘಟಕದ ಮುಖ್ಯಸ್ಥರು ಮತ್ತು ಆಸ್ಪತ್ರೆಯ ಇತರೆ ನಿರ್ವಹಣಾ ಸಿಬ್ಬಂದಿ ಉಪಸ್ಥಿತರಿದ್ದರು.

ಪ್ರಜಾವಾಣಿ
ಶನಿವಾರ • ಡಿಸೆಂಬರ್ 3, 2022

# ಕಸ್ತೂರ್ಬಾ ಆಸ್ಪತ್ರೆಗೆ ಪ್ರಶಸ್ತಿ

ಉಡುಪಿ: ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆಗೆ ಮೂಳೆ ಮತ್ತು ಕೀಲಿನ ವಿಭಾಗದಲ್ಲಿ (ದಕ್ಷಿಣ) ಎಕನಾಮಿಕ್ ಟೈಮ್ಸ್ ನೀಡುವ ಅತ್ಯುತ್ತಮ ಆಸ್ಪತ್ರೆ ಪ್ರಶಸ್ತಿ ಲಭಿಸಿದೆ ಎಂದು ಪ್ರಕಟಣೆ ತಿಳಿಸಿದೆ.

ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆ ಪ್ರತಿಭೆ ಗುರುತಿಸಿ ಬೆಳೆಸುವ ಮೂಲಕ ಸಮಾಜಕ್ಕೆ ಉತ್ತಮ ಸೇವೆಯನ್ನು ನೀಡಲು ಸದಾ ಪ್ರಯತ್ನಿಸುತ್ತದೆ ಎಂದು ಡಾ.ಎಚ್.ಎಸ್.ಬಲ್ಲಾಳ್ ತಿಳಿಸಿದ್ದಾರೆ.

ಪ್ರಶಸ್ತಿ ಪಡೆದಿರುವುದು ಉತ್ತಮ ಸಾಧನೆ ಎಂದು ಕೆಎಂಸಿ ಡೀನ್ ಡಾ.ಶರತ್ ಕೆ ರಾವ್, ಸಹ ಕುಲಾಧಿಪತಿ ಡಾ.ಎಚ್.ಎಸ್.ಬಲ್ಲಾಳ್, ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ, ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಡಾ.ಆನಂದ್ ವೇಣುಗೋಪಾಲ್ ಹಾಗೂ ಮೂಳೆ ಮತ್ತು ಕೀಲಿನ ವಿಭಾಗದ ಮುಖ್ಯಸ್ಥ ಡಾ.ಶ್ಯಾಮಸುಂದರ್ ಭಟ್, ಸಿ.ಜಿ. ಮುತ್ತಣ್ಣ ಹೇಳಿದ್ದಾರೆ.

THE TIMES OF INDIA, MANGALURU
SATURDAY, DECEMBER 3, 2022

# Kasturba Hospital bags award

**Manipal:** Kasturba Hospital, Manipal, has been awarded with the 'Economic Times'-Hospital Awards for Best Hospital – Orthopedic (South) 2022. Dr H S Ballal, pro chancellor of MAHE, Manipal, handed over the award to Dr Avinash Shetty, medical superintendent, Dr Anand Venugopal, COO – Teaching hospitals, MAHE, and Dr Shyamsundar Bhat, HoD of orthopaedics. CG Muthanna, COO, MAHE, Dr Sharath K Rao, dean KMC Manipal, and all the unit heads of the orthopaedics department, and management staff were present.

Dr Ballal said that Kasturba Hospital, Manipal, always tries to give the best to society, by identifying the best talent, and developing them to be better. The example of that is the department of orthopaedics, which was very well known across India since 1990. The department has created sub-specialisation, and each unit has specialised in treating, spine, shoulder, knee, hand, paediatric orthopaedic, sports injury and sports and ankle injuries.

Dr Sharath K Rao, dean and orthopaedic surgeon, said that, it's an achievement for the Kasturba Hospital, Manipal, and department of orthopaedics, to receive such a prestigious award from the 'Economic Times', he added. TNN

ಕನ್ನಡಪ್ರಭ
ಭಾನುವಾರ 4.12.2022

# ಮಣಿಪಾಲ ಕಸ್ತೂರ್ಬಾ ಆಸ್ಪತ್ರೆಗೆ ಅತ್ಯುತ್ತಮ ಆಸ್ಪತ್ರೆ ಪ್ರಶಸ್ತಿ

• **ಕನ್ನಡಪ್ರಭ ವಾರ್ತೆ** ಮಣಿಪಾಲ

ಇಲ್ಲಿನ ಮಣಿಪಾಲ ಕಸ್ತೂರ್ಬಾ ಆಸ್ಪತ್ರೆಗೆ ಎಕನಾಮಿಕ್ ಟೈಮ್ಸ್ ಕೊಡುವ ಅತ್ಯುತ್ತಮ ಆಸ್ಪತ್ರೆ ಪ್ರಶಸ್ತಿ - 2022 (ಮೂಳೆ ಮತ್ತು ಕೀಲು ವಿಭಾಗ) ಲಭಿಸಿದೆ.




ಅತ್ಯುತ್ತಮ ಆಸ್ಪತ್ರೆ ಪ್ರಶಸ್ತಿ ಪಡೆದ ಮಣಿಪಾಲ ಕಸ್ತೂರ್ಬಾ ಆಸ್ಪತ್ರೆ.

ಮಣಿಪಾಲದ ಮಾಹೆಯ ಸಹ ಕುಲಾಧಿಪತಿ ಡಾ. ಎಚ್.ಎಸ್. ಬಲ್ಲಾಳ್ ಅವರು ವೈದ್ಯಕೀಯ ಅಧೀಕ್ಷಕ ಡಾ. ಅವಿನಾಶ್ ಶೆಟ್ಟಿ, ಮಾಹೆಯ ಬೋಧನಾ ಆಸ್ಪತ್ರೆಗಳ ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿ ಡಾ. ಆನಂದ್ ವೇಣುಗೋಪಾಲ್ ಮತ್ತು ಮೂಳೆ ಮತ್ತು ಕೀಲು ವಿಭಾಗದ ಮುಖ್ಯಸ್ಥ ಡಾ. ಶ್ಯಾಮಸುಂದರ್ ಭಟ್ ಅವರಿಗೆ ಈ ಪ್ರಶಸ್ತಿಯನ್ನು ಹಸ್ತಾಂತರಿಸಿದರು.

ಈ ಸಂದರ್ಭದಲ್ಲಿ ಡಾ. ಬಲ್ಲಾಳ್ ಮಾತನಾಡಿ, ಕಸ್ತೂರ್ಬಾ ಆಸ್ಪತ್ರೆಯ ಮೂಳೆ ಮತ್ತು ಕೀಲು ವಿಭಾಗವು 1990 ರಿಂದ ಭಾರತದಾದ್ಯಂತ ಬಹಳ ಪ್ರಸಿದ್ಧವಾಗಿದ್ದು, ಈ ಪ್ರಶಸ್ತಿಯು ಅದಕ್ಕೆ ಉದಾಹರಣೆಯಾಗಿದೆ ಎಂದು ಶ್ಲಾಘಿಸಿದರು.

ಮಾಹೆಯ ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿ ಸಿ.ಜಿ. ಮುತ್ತಣ್ಣ, ಕೆಎಂಸಿ ಮಣಿಪಾಲ ಡೀನ್ ಡಾ. ಶರತ್ ಕೆ.ರಾವ್, ಎಲ್ಲ ಘಟಕಗಳ ಮುಖ್ಯಸ್ಥರು ಮತ್ತು ಆಸ್ಪತ್ರೆಯ ಇತರ ನಿರ್ವಹಣಾ ಸಿಬ್ಬಂದಿ ಉಪಸ್ಥಿತರಿದ್ದರು.

ನಮ್ಮ UDUPI BULLETIN

ಸುದ್ದಿಗಳು ಪ್ರಾದೇಶಿಕ

# ಕೆಎಂಸಿ ಮಣಿಪಾಲಕ್ಕೆ 'ಅತ್ಯುತ್ತಮ ಆಸ್ಪತ್ರೆ ಪ್ರಶಸ್ತಿ'

By **Udupi Bulletin News Desk** - December 2, 2022 0



**ಮಣಿಪಾಲ**: ಕಸ್ತೂರ್ಬಾ ಆಸ್ಪತ್ರೆ ಮಣಿಪಾಲಕ್ಕೆ ಎಕನಾಮಿಕ್ ಟೈಮ್ಸ್ ಅವರಿಂದ ಮೂಳೆ ಮತ್ತು ಕೀಲಿನ ವಿಭಾಗ (ದಕ್ಷಿಣ) 2022 ವಿಭಾಗದಲ್ಲಿ ಅತ್ಯುತ್ತಮ ಆಸ್ಪತ್ರೆ ಪ್ರಶಸ್ತಿ ಲಭಿಸಿದೆ.

ಎಕನಾಮಿಕ್ ಟೈಮ್ಸ್ 2 ನೇ ಆವೃತ್ತಿಯ 'ಆರೋಗ್ಯ ಕ್ಷೇತ್ರದ ಪ್ರಶಸ್ತಿಯಲ್ಲಿ' ವಿಶೇಷತೆ ಗುರುತಿಸುವುದು, ಅಂಗೀಕರಿಸುವುದು ಮತ್ತು ಆರೋಗ್ಯ ಕ್ಷೇತ್ರದ ಪ್ರತಿಯೊಂದು ವಿಭಾಗದಲ್ಲಿ ಅದ್ಭುತ ಕೊಡುಗೆ ನೀಡಿರುವ ಸಂಸ್ಥೆ ಹಾಗೂ ಸಾಧಕರ ಸಾಧನೆಯನ್ನು ದೃಢೀಕರಿಸುವುದು ಆಗಿದೆ.

ಎಕನಾಮಿಕ್ ಟೈಮ್ಸ್ ನ ಈ ಪ್ರಶಸ್ತಿಯ ಮಾನದಂಡವೂ, ರೋಗನಿರ್ಣಯ ಮತ್ತು ಪರೀಕ್ಷೆಗಳಲ್ಲಿ ಗಮನಾರ್ಹವಾದ ಬದಲಾವಣೆಗಳನ್ನು ಒದಗಿಸುವುದರಿಂದ ಹಿಡಿದು, ರೋಗಿಗಳಿಗೆ ಉತ್ತಮ ಚಿಕಿತ್ಸೆ ನೀಡಲು ಅನುಕೂಲವಾಗುವಂತೆ, ಪ್ರತಿ ಸೌಲಭ್ಯವನ್ನು, ಅದರ ಮೂಲಸೌಕರ್ಯ ಹಾಗೂ ಅತ್ಯುತ್ತಮ ತಂತ್ರಜ್ಞಾನವನ್ನು ಒದಗಿಸುವವರ ಪ್ರತಿಯೊಬ್ಬರ ಕೊಡುಗೆ ಮತ್ತು ಅವರ ಪ್ರಯತ್ನಗಳಿಗಾಗಿ ಗುರುತಿಸಲ್ಪಡುತ್ತಾರೆ.

ಮಣಿಪಾಲದ ಮಾಹೆಯ ಸಹ ಕುಲಾಧಿಪತಿ ಡಾ. ಎಚ್.ಎಸ್. ಬಲ್ಲಾಳ್ ಅವರು ವೈದ್ಯಕೀಯ ಅಧೀಕ್ಷಕ ಡಾ. ಅವಿನಾಶ್ ಶೆಟ್ಟಿ, ಮಾಹೆಯ ಬೋಧನಾ ಆಸ್ಪತ್ರೆಗಳ ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿ ಡಾ. ಆನಂದ್ ವೇಣುಗೋಪಾಲ್ ಮತ್ತು ಮೂಳೆ ಮತ್ತು ಕೀಲಿನ ವಿಭಾಗದ ಮುಖ್ಯಸ್ಥ ಡಾ. ಶ್ಯಾಮಸುಂದರ್ ಭಟ್ ಅವರಿಗೆ ಪ್ರಶಸ್ತಿಯನ್ನು ಹಸ್ತಾಂತರಿಸಿದರು.

ಮಾಹೆ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ
ಸಿ ಜಿ ಮುತ್ತಣ್ಣ, ಕೆಎಂಸಿ ಮಣಿಪಾಲ ಡೀನ್ ಡಾ. ಶರತ್ ಕೆ ರಾವ್, ಆರ್ಥೋಪೆಡಿಕ್ಸ್ ವಿಭಾಗದ ಎಲ್ಲಾ ಘಟಕದ ಮುಖ್ಯಸ್ಥರು ಮತ್ತು ಆಸ್ಪತ್ರೆಯ ಇತರ ನಿರ್ವಹಣಾ ಸಿಬ್ಬಂದಿಯವರು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಡಾ. ಎಚ್.ಎಸ್.ಬಲ್ಲಾಳ್ ಮಾತನಾಡಿ, ಮಣಿಪಾಲದ ಕಸ್ತುರ್ಬಾ ಆಸ್ಪತ್ರೆಯು ಉತ್ತಮ ಪ್ರತಿಭೆಯನ್ನು ಗುರುತಿಸಿ ಅವರನ್ನು ಬೆಳೆಸುವ ಮೂಲಕ ಸಮಾಜಕ್ಕೆ ಉತ್ತಮ ಸೇವೆಯನ್ನು ನೀಡಲು ಸದಾ ಪ್ರಯತ್ನಿಸುತ್ತದೆ.

1990 ರಿಂದ ಭಾರತದಾದ್ಯಂತ ಬಹಳ ಪ್ರಸಿದ್ಧವಾದ ಮೂಳೆ ಮತ್ತು ಕೀಲಿನ ವಿಭಾಗ ಇದಕ್ಕೆ ಉದಾಹರಣೆಯಾಗಿದೆ. ವಿಭಾಗವು ಉಪ-ವಿಶೇಷತೆಯನ್ನು ರಚಿಸಿಕೊಂಡಿದೆ ಮತ್ತು ಪ್ರತಿ ಘಟಕವು ಬೆನ್ನುಮೂಳೆ, ಭುಜ, ಮೊಣಕಾಲು, ಕೈ, ಮಕ್ಕಳ ಮೂಳೆ ಮತ್ತು ಕೀಲಿನ , ಕ್ರೀಡಾ ಗಾಯ, ಕಾಲು ಮತ್ತು ಪಾದದ ಚಿಕಿತ್ಸೆಯಲ್ಲಿ ಪರಿಣತಿಯನ್ನು ಹೊಂದಿದೆ.

ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆ ಮತ್ತು ಮೂಳೆ ಚಿಕಿತ್ಸಾ ವಿಭಾಗವು ಎಕನಾಮಿಕ್ ಟೈಮ್ಸ್‌ನಿಂದ ಇಂತಹ ಪ್ರತಿಷ್ಠಿತ ಪ್ರಶಸ್ತಿಯನ್ನು ಪಡೆದಿರುವುದು ಒಂದು ಅತ್ಯುತ್ತಮ ಸಾಧನೆಯಾಗಿದೆ ಎಂದು ಡೀನ್ ಮತ್ತು ಮೂಳೆ ಶಸ್ತ್ರಚಿಕಿತ್ಸಕ ಡಾ. ಶರತ್ ಕೆ ರಾವ್ ಹೇಳಿದರು.

ಇದರಿಂದ ನಾವು ಹೆಚ್ಚು ಜವಾಬ್ದಾರರಾಗಿ ಸಮಾಜಕ್ಕೆ ಉತ್ತಮ ಸೇವೆಯನ್ನು ನೀಡಲು ಹುರಿದುಂಬಿಸುತ್ತದೆ ಎಂದರು.

**Hai Karavali**



ಆರೋಗ್ಯ | ಉಡುಪಿ | ಕರಾವಳಿ

# ಕಸ್ತೂರ್ಬಾ ಆಸ್ಪತ್ರೆ ಮಣಿಪಾಲಕ್ಕೆ ದಿ ಎಕನಾಮಿಕ್ ಟೈಮ್ಸ್ ಅವರಿಂದ ಮೂಳೆ ಮತ್ತು ಕೀಲಿನ ವಿಭಾಗ (ದಕ್ಷಿಣ) 2022 ಅತ್ಯುತ್ತಮ ಆಸ್ಪತ್ರೆ ಪ್ರಶಸ್ತಿ.

45 seconds ago




Spread the love

ಮಣಿಪಾಲ, 2ನೇ ಡಿಸೆಂಬರ್ 2022: ಕಸ್ತೂರ್ಬಾ ಆಸ್ಪತ್ರೆ, ಮಣಿಪಾಲಕ್ಕೆ ಎಕನಾಮಿಕ್ ಟೈಮ್ಸ್ ಅವರಿಂದ ಮೂಳೆ ಮತ್ತು ಕೀಲಿನ ವಿಭಾಗ (ದಕ್ಷಿಣ) 2022 ವಿಭಾಗ ದಲ್ಲಿ ಅತ್ಯುತ್ತಮ ಆಸ್ಪತ್ರೆ ಪ್ರಶಸ್ತಿ ಲಭಿಸಿದೆ. ಎಕನಾಮಿಕ್ ಟೈಮ್ಸ್ 2 ನೇ ಆವೃತ್ತಿಯ 'ಆರೋಗ್ಯ ಕ್ಷೇತ್ರದ ಪ್ರಶಸ್ತಿಯಲ್ಲಿ' ವಿಶೇಷತೆ ಗುರುತಿಸುವುದು, ಅಂಗೀಕರಿಸುವುದು ಮತ್ತು ಆರೋಗ್ಯ ಕ್ಷೇತ್ರದ ಪ್ರತಿಯೊಂದು ವಿಭಾಗದಲ್ಲಿ ಅದ್ಭುತ ಕೊಡುಗೆ ನೀಡಿರುವ ಸಂಸ್ಥೆ ಹಾಗು ಸಾಧಕರ ಸಾಧನೆಯನ್ನು ಧೃಡೀಕರಿಸುವುದು ಆಗಿದೆ. ಎಕನಾಮಿಕ್ ಟೈಮ್ಸ್ ನ ಈ ಪ್ರಶಸ್ತಿಯ ಮಾನದಂಡವೂ, ರೋಗನಿರ್ಣಯ ಮತ್ತು ಪರೀಕ್ಷೆಗಳಲ್ಲಿ ಗಮನಾರ್ಹವಾದ ಬದಲಾವಣೆಗಳನ್ನು ಒದಗಿಸುವುದರಿಂದ ಹಿಡಿದು, ರೋಗಿಗಳಿಗೆ ಉತ್ತಮ ಚಿಕಿತ್ಸೆ ನೀಡಲು ಅನುಕೂಲವಾಗುವಂತೆ, ಪ್ರತಿ ಸೌಲಭ್ಯವನ್ನು, ಅದರ ಮೂಲಸೌಕರ್ಯ ಹಾಗು ಅತ್ಯುತ್ತಮ ತಂತ್ರಜ್ಞಾನವನ್ನು ಒದಗಿಸುವವರ ಪ್ರತಿಯೊಬ್ಬರ ಕೊಡುಗೆ ಮತ್ತು ಅವರ ಪ್ರಯತ್ನಗಳಿಗಾಗಿ ಗುರುತಿಸಲ್ಪಡುತ್ತಾರೆ.

ಮಣಿಪಾಲದ ಮಾಹೆಯ ಸಹ ಕುಲಾಧಿಪತಿ ಡಾ.ಎಚ್.ಎಸ್.ಬಲ್ಲಾಳ್ ಅವರು ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ, ಮಾಹೆಯ ಬೋಧನಾ ಆಸ್ಪತ್ರೆಗಳ ಮುಖ್ಯ ಕಾರ್ಯ-ನಿರ್ವಾಹಣಾಧಿಕಾರಿ ಡಾ ಆನಂದ್ ವೇಣುಗೋಪಾಲ್ ಮತ್ತು ಮೂಳೆ ಮತ್ತು ಕೀಲಿನ ವಿಭಾಗದ ಮುಖ್ಯಸ್ಥ ಡಾ.ಶ್ಯಾಮಸುಂದರ್ ಭಟ್ ಅವರಿಗೆ ಪ್ರಶಸ್ತಿಯನ್ನು ಹಸ್ತಾಂತರಿಸಿದರು. ಶ್ರೀ ಸಿ ಜಿ ಮುತ್ತಣ್ಣ, ಮುಖ್ಯ ಕಾರ್ಯ-ನಿರ್ವಾಹಣಾಧಿಕಾರಿ ಮಾಹೆ, ಡಾ ಶರತ್ ಕೆ ರಾವ್, ಡೀನ್ ಕೆಎಂಸಿ ಮಣಿಪಾಲ, ಆರ್ಥೋಪೆಡಿಕ್ಸ್ ವಿಭಾಗದ ಎಲ್ಲಾ ಘಟಕದ ಮುಖ್ಯಸ್ಥರು ಮತ್ತು ಆಸ್ಪತ್ರೆಯ ಇತರ ನಿರ್ವಹಣಾ ಸಿಬ್ಬಂದಿಯವರು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಡಾ.ಎಚ್.ಎಸ್.ಬಲ್ಲಾಳ್ ಮಾತನಾಡಿ, ಮಣಿಪಾಲದ ಕಸ್ತುರ್ಬಾ ಆಸ್ಪತ್ರೆಯು ಉತ್ತಮ ಪ್ರತಿಭೆಯನ್ನು ಗುರುತಿಸಿ ಅವರನ್ನು ಬೆಳೆಸುವ ಮೂಲಕ ಸಮಾಜಕ್ಕೆ ಉತ್ತಮ ಸೇವೆಯನ್ನು ನೀಡಲು ಸದಾ ಪ್ರಯತ್ನಿಸುತ್ತದೆ. 1990 ರಿಂದ ಭಾರತದಾದ್ಯಂತ ಬಹಳ ಪ್ರಸಿದ್ಧವಾದ ಮೂಳೆ ಮತ್ತು ಕೀಲಿನ ವಿಭಾಗ ಇದಕ್ಕೆ ಉದಾಹರಣೆಯಾಗಿದೆ. ವಿಭಾಗವು ಉಪ-ವಿಶೇಷತೆಯನ್ನು ರಚಿಸಿಕೊಂಡಿದೆ ಮತ್ತು ಪ್ರತಿ ಘಟಕವು ಬೆನ್ನುಮೂಳೆ, ಭುಜ, ಮೊಣಕಾಲು, ಕೈ, ಮಕ್ಕಳ ಮೂಳೆ ಮತ್ತು ಕೀಲಿನ , ಕ್ರೀಡಾ ಗಾಯ, ಕಾಲು ಮತ್ತು ಪಾದದ ಚಿಕಿತ್ಸೆಯಲ್ಲಿ ಪರಿಣತಿಯನ್ನು ಹೊಂದಿದೆ.

ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆ ಮತ್ತು ಮೂಳೆಚಿಕಿತ್ಸಾ ವಿಭಾಗವು ಎಕನಾಮಿಕ್ ಟೈಮ್ಸ್‌ನಿಂದ ಇಂತಹ ಪ್ರತಿಷ್ಠಿತ ಪ್ರಶಸ್ತಿಯನ್ನು ಪಡೆದಿರುವುದು ಒಂದು ಅತ್ಯುತ್ತಮ ಸಾಧನೆಯಾಗಿದೆ ಎಂದು ಡೀನ್ ಮತ್ತು ಮೂಳೆ ಶಸ್ತ್ರಚಿಕಿತ್ಸಕ ಡಾ ಶರತ್ ಕೆ ರಾವ್ ಹೇಳಿದರು. ಇದರಿಂದ ನಾವು ಹೆಚ್ಚು ಜವಾಬ್ದಾರರಾಗಿ ಸಮಾಜಕ್ಕೆ ಉತ್ತಮ ಸೇವೆಯನ್ನು ನೀಡಲು ಹುರಿದುಂಬಿಸುತ್ತದೆ ಎಂದರು.

**Jana Prathinidhi**

# ಕಸ್ತೂರ್ಬಾ ಆಸ್ಪತ್ರೆ ಮಣಿಪಾಲಕ್ಕೆ ದಿ ಎಕನಾಮಿಕ್ ಟೈಮ್ಸ್ ಅವರಿಂದ ಮೂಳೆ ಮತ್ತು ಕೀಲಿನ ವಿಭಾಗ (ದಕ್ಷಿಣ) 2022 ಅತ್ಯುತ್ತಮ ಆಸ್ಪತ್ರೆ ಪ್ರಶಸ್ತಿ

By **Janaprathinidhi** December 2, 2022

Facebook | Twitter | Pinterest | WhatsApp



**ಮಣಿಪಾಲ:** ಕಸ್ತೂರ್ಬಾ ಆಸ್ಪತ್ರೆ, ಮಣಿಪಾಲಕ್ಕೆ ಎಕನಾಮಿಕ್ ಟೈಮ್ಸ್ ಅವರಿಂದ ಮೂಳೆ ಮತ್ತು ಕೀಲಿನ ವಿಭಾಗ (ದಕ್ಷಿಣ) 2022 ವಿಭಾಗ ದಲ್ಲಿ ಅತ್ಯುತ್ತಮ ಆಸ್ಪತ್ರೆ ಪ್ರಶಸ್ತಿ ಲಭಿಸಿದೆ. ಎಕನಾಮಿಕ್ ಟೈಮ್ಸ್ 2 ನೇ ಆವೃತ್ತಿಯ 'ಆರೋಗ್ಯ ಕ್ಷೇತ್ರದ ಪ್ರಶಸ್ತಿಯಲ್ಲಿ' ವಿಶೇಷತೆ ಗುರುತಿಸುವುದು, ಅಂಗೀಕರಿಸುವುದು ಮತ್ತು ಆರೋಗ್ಯ ಕ್ಷೇತ್ರದ ಪ್ರತಿಯೊಂದು ವಿಭಾಗದಲ್ಲಿ ಅದ್ಭುತ ಕೊಡುಗೆ ನೀಡಿರುವ ಸಂಸ್ಥೆ ಹಾಗು ಸಾಧಕರ ಸಾಧನೆಯನ್ನು ಧೃಡೀಕರಿಸುವುದು ಆಗಿದೆ. ಎಕನಾಮಿಕ್ ಟೈಮ್ಸ್ ನ ಈ ಪ್ರಶಸ್ತಿಯ ಮಾನದಂಡವೂ, ರೋಗನಿರ್ಣಯ ಮತ್ತು ಪರೀಕ್ಷೆಗಳಲ್ಲಿ ಗಮನಾರ್ಹವಾದ ಬದಲಾವಣೆಗಳನ್ನು ಒದಗಿಸುವುದರಿಂದ ಹಿಡಿದು, ರೋಗಿಗಳಿಗೆ ಉತ್ತಮ ಚಿಕಿತ್ಸೆ ನೀಡಲು ಅನುಕೂಲವಾಗುವಂತೆ, ಪ್ರತಿ ಸೌಲಭ್ಯವನ್ನು, ಅದರ ಮೂಲಸೌಕರ್ಯ ಹಾಗು ಅತ್ಯುತ್ತಮ ತಂತ್ರಜ್ಞಾನವನ್ನು ಒದಗಿಸುವವರ ಪ್ರತಿಯೊಬ್ಬರ ಕೊಡುಗೆ ಮತ್ತು ಅವರ ಪ್ರಯತ್ನಗಳಿಗಾಗಿ ಗುರುತಿಸಲ್ಪಡುತ್ತಾರೆ.

ಮಣಿಪಾಲದ ಮಾಹೆಯ ಸಹ ಕುಲಾಧಿಪತಿ ಡಾ.ಎಚ್.ಎಸ್.ಬಲ್ಲಾಳ್ ಅವರು ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ, ಮಾಹೆಯ ಬೋಧನಾ ಆಸ್ಪತ್ರೆಗಳ ಮುಖ್ಯ ಕಾರ್ಯ-ನಿರ್ವಾಹಣಾಧಿಕಾರಿ ಡಾ ಆನಂದ್ ವೇಣುಗೋಪಾಲ್ ಮತ್ತು ಮೂಳೆ ಮತ್ತು ಕೀಲಿನ ವಿಭಾಗದ ಮುಖ್ಯಸ್ಥ ಡಾ.ಶ್ಯಾಮಸುಂದರ್ ಭಟ್ ಅವರಿಗೆ ಪ್ರಶಸ್ತಿಯನ್ನು ಹಸ್ತಾಂತರಿಸಿದರು. ಶ್ರೀ ಸಿ ಜಿ ಮುತ್ತಣ್ಣ, ಮುಖ್ಯ ಕಾರ್ಯ-ನಿರ್ವಾಹಣಾಧಿಕಾರಿ ಮಾಹೆ, ಡಾ ಶರತ್ ಕೆ ರಾವ್, ಡೀನ್ ಕೆಎಂಸಿ ಮಣಿಪಾಲ, ಆರ್ಥೋಪೆಡಿಕ್ಸ್ ವಿಭಾಗದ ಎಲ್ಲಾ ಘಟಕದ ಮುಖ್ಯಸ್ಥರು ಮತ್ತು ಆಸ್ಪತ್ರೆಯ ಇತರ ನಿರ್ವಹಣಾ ಸಿಬ್ಬಂದಿಯವರು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಡಾ.ಎಚ್.ಎಸ್.ಬಲ್ಲಾಳ್ ಮಾತನಾಡಿ, ಮಣಿಪಾಲದ ಕಸುರ್ಬಾ ಆಸ್ಪತ್ರೆಯು ಉತ್ತಮ ಪ್ರತಿಭೆಯನ್ನು ಗುರುತಿಸಿ ಅವರನ್ನು ಬೆಳೆಸುವ ಮೂಲಕ ಸಮಾಜಕ್ಕೆ ಉತ್ತಮ ಸೇವೆಯನ್ನು ನೀಡಲು ಸದಾ ಪ್ರಯತ್ನಿಸುತ್ತದೆ. 1990 ರಿಂದ ಭಾರತದಾದ್ಯಂತ ಬಹಳ ಪ್ರಸಿದ್ಧವಾದ ಮೂಳೆ ಮತ್ತು ಕೀಲಿನ ವಿಭಾಗ ಇದಕ್ಕೆ ಉದಾಹರಣೆಯಾಗಿದೆ. ವಿಭಾಗವು ಉಪ-ವಿಶೇಷತೆಯನ್ನು ರಚಿಸಿಕೊಂಡಿದೆ ಮತ್ತು ಪ್ರತಿ ಘಟಕವು ಬೆನ್ನುಮೂಳೆ, ಭುಜ, ಮೊಣಕಾಲು, ಕೈ, ಮಕ್ಕಳ ಮೂಳೆ ಮತ್ತು ಕೀಲಿನ , ಕ್ರೀಡಾ ಗಾಯ, ಕಾಲು ಮತ್ತು ಪಾದದ ಚಿಕಿತ್ಸೆಯಲ್ಲಿ ಪರಿಣತಿಯನ್ನು ಹೊಂದಿದೆ.

ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆ ಮತ್ತು ಮೂಳೆಚಿಕಿತ್ಸಾ ವಿಭಾಗವು ಎಕನಾಮಿಕ್ ಟೈಮ್ಸ್‌ನಿಂದ ಇಂತಹ ಪ್ರತಿಷ್ಠಿತ ಪ್ರಶಸ್ತಿಯನ್ನು ಪಡೆದಿರುವುದು ಒಂದು ಅತ್ಯುತ್ತಮ ಸಾಧನೆಯಾಗಿದೆ ಎಂದು ಡೀನ್ ಮತ್ತು ಮೂಳೆ ಶಸ್ತ್ರಚಿಕಿತ್ಸಕ ಡಾ ಶರತ್ ಕೆ ರಾವ್ ಹೇಳಿದರು. ಇದರಿಂದ ನಾವು ಹೆಚ್ಚು ಜವಾಬ್ದಾರರಾಗಿ ಸಮಾಜಕ್ಕೆ ಉತ್ತಮ ಸೇವೆಯನ್ನು ನೀಡಲು ಹುರಿದುಂಬಿಸುತ್ತದೆ ಎಂದರು.

## Udupi Times

Coastal News

# ಮಣಿಪಾಲ ಕೆಎಂಸಿ ಆಸ್ಪತ್ರೆಗೆ ಮತ್ತೊಂದು ಪ್ರಶಸ್ತಿ ಗರಿ

December 2, 2022




ಮಣಿಪಾಲ, ಡಿ.2 (**ಉಡುಪಿ ಟೈಮ್ಸ್ ವರದಿ**): ಕಸ್ತೂರ್ಬಾ ಆಸ್ಪತ್ರೆ, ಮಣಿಪಾಲಕ್ಕೆ ಎಕನಾಮಿಕ್ ಟೈಮ್ಸ್ ಅವರಿಂದ ಮೂಳೆ ಮತ್ತು ಕೀಲಿನ ವಿಭಾಗ (ದಕ್ಷಿಣ) 2022 ಅತ್ಯುತ್ತಮ ಆಸ್ಪತ್ರೆ ಎಂಬ ಪ್ರಶಸ್ತಿ ಲಭಿಸಿದೆ.

ಮಣಿಪಾಲದ ಮಾಹೆಯ ಸಹ ಕುಲಾಧಿಪತಿ ಡಾ.ಎಚ್.ಎಸ್.ಬಲ್ಲಾಳ್ ಅವರು ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ, ಮಾಹೆಯ ಬೋಧನಾ ಆಸ್ಪತ್ರೆಗಳ ಮುಖ್ಯ ಕಾರ್ಯ-ನಿರ್ವಹಣಾಧಿಕಾರಿ ಡಾ ಆನಂದ್ ವೇಣುಗೋಪಾಲ್ ಮತ್ತು ಮೂಳೆ ಮತ್ತು ಕೀಲಿನ ವಿಭಾಗದ ಮುಖ್ಯಸ್ಥ ಡಾ.ಶ್ಯಾಮಸುಂದರ್ ಭಟ್ ಅವರಿಗೆ ಪ್ರಶಸ್ತಿಯನ್ನು ಹಸ್ತಾಂತರಿಸಿದರು.

ಈ ವೇಳೆ ಮಣಿಪಾಲದ ಮಾಹೆಯ ಸಹ ಕುಲಾಧಿಪತಿ ಡಾ.ಎಚ್.ಎಸ್.ಬಲ್ಲಾಳ್ ಅವರು, ಮಾತನಾಡಿ, ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆಯು ಉತ್ತಮ ಪ್ರತಿಭೆಯನ್ನು ಗುರುತಿಸಿ ಅವರನ್ನು ಬೆಳೆಸುವ ಮೂಲಕ ಸಮಾಜಕ್ಕೆ ಉತ್ತಮ ಸೇವೆಯನ್ನು ನೀಡಲು ಸದಾ ಪ್ರಯತ್ನಿಸುತ್ತದೆ. 1990 ರಿಂದ ಭಾರತದಾದ್ಯಂತ ಬಹಳ ಪ್ರಸಿದ್ಧವಾದ ಮೂಳೆ ಮತ್ತು ಕೀಲಿನ ವಿಭಾಗ ಇದಕ್ಕೆ ಉದಾಹರಣೆಯಾಗಿದೆ. ವಿಭಾಗವು ಉಪ-ವಿಶೇಷತೆಯನ್ನು ರಚಿಸಿಕೊಂಡಿದೆ ಮತ್ತು ಪ್ರತಿ ಘಟಕವು ಬೆನ್ನುಮೂಳೆ, ಭುಜ, ಮೊಣಕಾಲು, ಕೈ, ಮಕ್ಕಳ ಮೂಳೆ ಮತ್ತು ಕೀಲಿನ, ಕ್ರೀಡಾ ಗಾಯ, ಕಾಲು ಮತ್ತು ಪಾದದ ಚಿಕಿತ್ಸೆಯಲ್ಲಿ ಪರಿಣತಿಯನ್ನು ಹೊಂದಿದೆ ಎಂದು ತಿಳಿಸಿದರು.

ಇದೇ ವೇಳೆ ಕೆಎಂಸಿ ಮಣಿಪಾಲದ ಡೀನ್, ಮೂಳೆ ಶಸ್ತ್ರಚಿಕಿತ್ಸಕ ಡಾ ಶರತ್ ಕೆ ರಾವ್ ಅವರು ಮಾತನಾಡಿ, ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆ ಮತ್ತು ಮೂಳೆಚಿಕಿತ್ಸಾ ವಿಭಾಗವು ಎಕನಾಮಿಕ್ ಟೈಮ್ಸ್‌ನಿಂದ ಇಂತಹ ಪ್ರತಿಷ್ಠಿತ ಪ್ರಶಸ್ತಿಯನ್ನು ಪಡೆದಿರುವುದು ಒಂದು ಅತ್ಯುತ್ತಮ ಸಾಧನೆಯಾಗಿದೆ. ಇದು ನಾವು ಹೆಚ್ಚು ಜವಾಬ್ದಾರರಾಗಿ ಸಮಾಜಕ್ಕೆ ಉತ್ತಮ ಸೇವೆಯನ್ನು ನೀಡಲು ಹುರಿದುಂಬಿಸುತ್ತದೆ ಎಂದರು.

ಈ ಸಂದರ್ಭದಲ್ಲಿ ಮಾಹೆಯ ಮುಖ್ಯ ಕಾರ್ಯ-ನಿರ್ವಹಣಾಧಿಕಾರಿ ಸಿ.ಜಿ ಮುತ್ತಣ್ಣ, ಆರ್ಥೋಪೆಡಿಕ್ಸ್ ವಿಭಾಗದ ಎಲ್ಲಾ ಘಟಕದ ಮುಖ್ಯಸ್ಥರು ಮತ್ತು ಆಸ್ಪತ್ರೆಯ ಇತರ ನಿರ್ವಹಣಾ ಸಿಬ್ಬಂದಿಯವರು ಉಪಸ್ಥಿತರಿದ್ದರು.

Monday, December 5, 2022

ಸಾಧನೆ

# ಕಸ್ತೂರ್ಬಾ ಆಸ್ಪತ್ರೆ ಮಣಿಪಾಲಕ್ಕೆ ಮೂಳೆ ಮತ್ತು ಕೀಲಿನ ವಿಭಾಗ (ದಕ್ಷಿಣ) 2022 ಅತ್ಯುತ್ತಮ ಆಸ್ಪತ್ರೆ ಪ್ರಶಸ್ತಿ

By Janardhan Kodavoor/Team karavalixpress, December 2, 2022




ಮಣಿಪಾಲ, 2ನೇ ಡಿಸೆಂಬರ್ 2022: ಕಸ್ತೂರ್ಬಾ ಆಸ್ಪತ್ರೆ, ಮಣಿಪಾಲಕ್ಕೆ ಎಕನಾಮಿಕ್ ಟೈಮ್ಸ್ ಅವರಿಂದ ಮೂಳೆ ಮತ್ತು ಕೀಲಿನ ವಿಭಾಗ (ದಕ್ಷಿಣ) 2022 ವಿಭಾಗ ದಲ್ಲಿ ಅತ್ಯುತ್ತಮ ಆಸ್ಪತ್ರೆ ಪ್ರಶಸ್ತಿ ಲಭಿಸಿದೆ. ಎಕನಾಮಿಕ್ ಟೈಮ್ಸ್ 2 ನೇ ಆವೃತ್ತಿಯ 'ಆರೋಗ್ಯ ಕ್ಷೇತ್ರದ ಪ್ರಶಸ್ತಿಯಲ್ಲಿ,' ವಿಶೇಷತೆ ಗುರುತಿಸುವುದು, ಅಂಗೀಕರಿಸುವುದು ಮತ್ತು ಆರೋಗ್ಯ ಕ್ಷೇತ್ರದ ಪ್ರತಿಯೊಂದು ವಿಭಾಗದಲ್ಲಿ ಅದ್ಭುತ ಕೊಡುಗೆ ನೀಡಿರುವ ಸಂಸ್ಥೆ ಹಾಗು ಸಾಧಕರ ಸಾಧನೆಯನ್ನು ಧೃಡೀಕರಿಸುವುದು ಆಗಿದೆ. ಎಕನಾಮಿಕ್ ಟೈಮ್ಸ್ ನ ಈ ಪ್ರಶಸ್ತಿಯ ಮಾನದಂಡವೂ, ರೋಗನಿರ್ಣಯ ಮತ್ತು ಪರೀಕ್ಷೆಗಳಲ್ಲಿ ಗಮನಾರ್ಹವಾದ ಬದಲಾವಣೆಗಳನ್ನು ಒದಗಿಸುವುದರಿಂದ ಹಿಡಿದು, ರೋಗಿಗಳಿಗೆ ಉತ್ತಮ ಚಿಕಿತ್ಸೆ ನೀಡಲು ಅನುಕೂಲವಾಗುವಂತೆ, ಪ್ರತಿ ಸೌಲಭ್ಯವನ್ನು, ಅದರ ಮೂಲಸೌಕರ್ಯ ಹಾಗು ಅತ್ಯುತ್ತಮ ತಂತ್ರಜ್ಞಾನವನ್ನು ಒದಗಿಸುವವರ ಪ್ರತಿಯೊಬ್ಬರ ಕೊಡುಗೆ ಮತ್ತು ಅವರ ಪ್ರಯತ್ನಗಳಿಗಾಗಿ ಗುರುತಿಸಲ್ಪಡುತ್ತಾರೆ.

ಮಣಿಪಾಲದ ಮಾಹೆಯ ಸಹ ಕುಲಾಧಿಪತಿ ಡಾ.ಎಚ್.ಎಸ್.ಬಲ್ಲಾಳ್ ಅವರು ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ, ಮಾಹೆಯ ಬೋಧನಾ ಆಸ್ಪತ್ರೆಗಳ ಮುಖ್ಯ ಕಾರ್ಯ-ನಿರ್ವಾಹಣಾಧಿಕಾರಿ ಡಾ ಆನಂದ್ ವೇಣುಗೋಪಾಲ್ ಮತ್ತು ಮೂಳೆ ಮತ್ತು ಕೀಲಿನ ವಿಭಾಗದ ಮುಖ್ಯಸ್ಥ ಡಾ.ಶ್ಯಾಮಸುಂದರ್ ಭಟ್ ಅವರಿಗೆ ಪ್ರಶಸ್ತಿಯನ್ನು ಹಸ್ತಾಂತರಿಸಿದರು. ಶ್ರೀ ಸಿ ಜಿ ಮುತ್ತಣ್ಣ, ಮುಖ್ಯ ಕಾರ್ಯ-ನಿರ್ವಾಹಣಾಧಿಕಾರಿ ಮಾಹೆ, ಡಾ ಶರತ್ ಕೆ ರಾವ್, ಡೀನ್ ಕೆಎಂಸಿ ಮಣಿಪಾಲ, ಆರ್ಥೋಪೆಡಿಕ್ಸ್ ವಿಭಾಗದ ಎಲ್ಲಾ ಘಟಕದ ಮುಖ್ಯಸ್ಥರು ಮತ್ತು ಆಸ್ಪತ್ರೆಯ ಇತರ ನಿರ್ವಹಣಾ ಸಿಬ್ಬಂದಿಯವರು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಡಾ.ಎಚ್.ಎಸ್.ಬಲ್ಲಾಳ್ ಮಾತನಾಡಿ, ಮಣಿಪಾಲದ ಕಸುರ್ಬಾ ಆಸ್ಪತ್ರೆಯು ಉತ್ತಮ ಪ್ರತಿಭೆಯನ್ನು ಗುರುತಿಸಿ ಅವರನ್ನು ಬೆಳೆಸುವ ಮೂಲಕ ಸಮಾಜಕ್ಕೆ ಉತ್ತಮ ಸೇವೆಯನ್ನು ನೀಡಲು ಸದಾ ಪ್ರಯತ್ನಿಸುತ್ತದೆ. 1990 ರಿಂದ ಭಾರತದಾದ್ಯಂತ ಬಹಳ ಪ್ರಸಿದ್ಧವಾದ ಮೂಳೆ ಮತ್ತು ಕೀಲಿನ ವಿಭಾಗ ಇದಕ್ಕೆ ಉದಾಹರಣೆಯಾಗಿದೆ. ವಿಭಾಗವು ಉಪ-ವಿಶೇಷತೆಯನ್ನು ರಚಿಸಿಕೊಂಡಿದೆ ಮತ್ತು ಪ್ರತಿ ಘಟಕವು ಬೆನ್ನುಮೂಳೆ, ಭುಜ, ಮೊಣಕಾಲು, ಕೈ, ಮಕ್ಕಳ ಮೂಳೆ ಮತ್ತು ಕೀಲಿನ , ಕ್ರೀಡಾ ಗಾಯ, ಕಾಲು ಮತ್ತು ಪಾದದ ಚಿಕಿತ್ಸೆಯಲ್ಲಿ ಪರಿಣತಿಯನ್ನು ಹೊಂದಿದೆ.

ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆ ಮತ್ತು ಮೂಳೆಚಿಕಿತ್ಸಾ ವಿಭಾಗವು ಎಕನಾಮಿಕ್ ಟೈಮ್ಸ್‌ನಿಂದ ಇಂತಹ ಪ್ರತಿಷ್ಠಿತ ಪ್ರಶಸ್ತಿಯನ್ನು ಪಡೆದಿರುವುದು ಒಂದು ಅತ್ಯುತ್ತಮ ಸಾಧನೆಯಾಗಿದೆ ಎಂದು ಡೀನ್ ಮತ್ತು ಮೂಳೆ ಶಸ್ತ್ರಚಿಕಿತ್ಸಕ ಡಾ ಶರತ್ ಕೆ ರಾವ್ ಹೇಳಿದರು. ಇದರಿಂದ ನಾವು ಹೆಚ್ಚು ಜವಾಬ್ದಾರರಾಗಿ ಸಮಾಜಕ್ಕೆ ಉತ್ತಮ ಸೇವೆಯನ್ನು ನೀಡಲು ಹುರಿದುಂಬಿಸುತ್ತದೆ ಎಂದರು.

## Other Links:

- **Public Next -** https://publicnext.com/article/nid/Udupi/Health-and-Fitness/?lang=kn&node=745663
- **Daijiworld -** https://www.daijiworld.com/news/newsDisplay?newsID=1025574
- **Prime TV Live -** https://www.primetvlive.in/2022/12/blog-post_26.html?m=1